**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ,**
**ಕೆ.ಆರ್.ನಗರ.**
**ಸಿ.ಸಿ ನಂಃ 564/ 2020**

| | | |
|---|---|---|
| **ಸಾಕ್ಷಿಯ ಹೆಸರುಃ** | **ಶಿವಕುಮಾರ** | **ಫ್ರಾಸಾಃ 5** |
| **ತಂದೆಯ ಹೆಸರುಃ** | **ಅಣ್ಣೇಗೌಡ** | **ಚಾಸಾಃ 4** |
| **ವಯಸ್ಸುಃ** | **50 ವರ್ಷ** | **ದಿಃ 04-03-2025** |
| **ಉದ್ಯೋಗಃ** | **ಕೂಲಿ** | **ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.** |
| **ವಾಸ ಸ್ಥಳಃ** | **ಹಾರಂಬಳ್ಳಿ** | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ಆರೋಪಿತರು ನನ್ನ ಊರಿನವರು. ಚಾಸಾ 1 ನನ್ನ ಭಾವ. ದಿಃ 01.09.2019 ರಂದು ಮದ್ಯಾಹ್ನ 1.30 ಗಂಟೆ ಸಮಯಕ್ಕೆ ಯಾವುದೇ ಘಟನೆಯಾಗಿರುವುದಿಲ್ಲ. ಸದರಿ ದಿನದಂದು ನಾನು ಯಾವುದೇ ಘಟನೆಯನ್ನು ಕಣ್ಣಾರೆ ನೋಡಿರುವುದಿಲ್ಲ. ನನಗೆ ಈ ಪ್ರಕರಣದ ಘಟನೆಯ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಚಾಸಾಃ1 ಮತ್ತು ಆರೋಪಿತರ ಮಧ್ಯೆ ಯಾವುದೇ ಜಗಳವನ್ನು ಬಿಡಿಸಿರುವುದಿಲ್ಲ. ನಾನು ಆರೋಪಿತರ ವಿರುದ್ಧ ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಘಟನೆಯ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ

**( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು – ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ**

1. ದಿಃ 01.09.2019 ರಂದು ಮದ್ಯಾಹ್ನ 1.30 ಗಂಟೆ ಸಮಯಕ್ಕೆ ಚಾಸಾ 2 ಮತ್ತು 3 ರವರು ಅವರ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ಜಮೀನಿನಲ್ಲಿ ಮರ ಕಡಿದಿರುವ ವಿಷಯವನ್ನು ಚಾಸಾ 2 ರವರು 1 ನೇ ಆರೋಪಿಯಲ್ಲಿ ಕೇಳಿದಾಗ 1 ನೇ ಆರೋಪಿಯು ಚಾಸಾ 2 ರವರಿಗೆ

ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ಯಾಕೆ ಬೈಯುತ್ತಿಯಾ ಎಂದು ಚಾಸಾ 2 ರವರು ಪ್ರಶ್ನಿಸಿದಾಗ 1 ನೇ ಆರೋಪಿಯು 2 ನೇ ಆರೋಪಿಯನ್ನು ಕರೆದುಕೊಂಡು ಬಂದು ಚಾಸಾ 2 ರವರಿಗೆ ಹೊಡೆಯುವಂತೆ ಹೇಳಿರುತ್ತಾರೆ ಎಂದರೆ ಸರಿಯಲ್ಲ.

2. 1 ನೇ ಆರೋಪಿಯು ಚಾಸಾ 2 ರವರ ಕತ್ತಿನ ಪಟ್ಟಿ ಹಿಡಿದು ಎಳೆದಾಡಿ ಅವರ ಕೈಯಿಂದ ಚಾಸಾ 2 ರವರ ಮೈಕೈಗೆ ಹೊಡೆದು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

3. 2 ನೇ ಆರೋಪಿಯು ಗೊದುಮೊಟ್ಟೆಯಿಂದ ಚಾಸಾ 2 ರವರ ಬೆನ್ನಿಗೆ, ಮೈಗೆ, ತೊಡೆಯ ಭಾಗಕ್ಕೆ ಹೊಡೆದು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

4. 3 ನೇ ಆರೋಪಿಯು ಚಾಸಾ 2 ರವರ ತಲೆಯನ್ನು ಹಿಡಿದು ಗುಂಜಾಡಿರುತ್ತಾರೆ ಎಂದರೆ ಸರಿಯಲ್ಲ. ಜಗಳ ಬಿಡಿಸಲು ಹೋದ ಚಾಸಾ 2 ರವರಿಗೂ ಸಹ ಆರೋಪಿತರು ಹೊಡೆಯಲು ಪ್ರಯತ್ನಿಸಿರುತ್ತಾರೆ ಎಂದರೆ ಸರಿಯಲ್ಲ.

5. ನಾನು ಮತ್ತು ಚಾಸಾಃ5 ಹಾಗೂ ಚಾಸಾಃ6 ರವರು ಸ್ಥಳಕ್ಕೆ ಹೋಗಿ ಜಗಳವನ್ನು ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿತರು ಚಾಸಾ 2 ರವರಿಗೆ ಜೀವದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

6. ಘಟನೆಯ ಸಂಬಂಧ ನಾನು ಆರೋಪಿತರ ವಿರುದ್ಧ ಪೋಲಿಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ತಾನು ನೀಡಿದ ಹೇಳಿಕೆಯನ್ನು ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಅಲ್ಲಗಳೆದಿರುವುದರಿಂದ ಸಾಕ್ಷಿಯ ಹೇಳಿಕೆಯನ್ನು ಅದನ್ನು ನಿಪಿ– 3 ಎಂದು ಗುರುತಿಸಲಾಯಿತು. ಎಲ್ಲಾ ವಿಷಯಗಳು ಗೊತ್ತಿದ್ದರೂ ಸಹ ಆರೋಪಿತರೊಂದಿಗೆ ರಾಜಿಯಾಗಿ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಟಿ.ಜಿ ವಕೀಲರಿಂದಃ</u>**

ಯಾವುದೇ ಪಾಟೀ ಸವಾಲು ಇರುವುದಿಲ್ಲ.

**ಮರುವಿಚಾರಣೆ ಃ ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಜೆಎಂಎಫ್‌ಸಿ ನ್ಯಾಯಾಧೀಶರು**
**ಕೆ.ಆರ್.ನಗರ**